ಪ್ರಶ್ನೆ ಸಂಖ್ಯೆ : 48 (11) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ)

ಮಾನ್ಯ ಲೋಕೋಪಯೋಗಿ ಹಾಗೂ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಹುಬ್ಬಳ್ಳಿ – ಧಾರವಾಡ ಮಧ್ಯದ ರಸ್ತೆಯನ್ನು ಚತುಷ್ಪಥ ರಸ್ತೆಯಾಗಿ ಅಭಿವೃದ್ಧಿಪಡಿಸುವ ಯೋಜನೆ ಸರ್ಕಾರಕ್ಕಿದೆಯೇ;

ಆ) ಹಾಗಿದ್ದಲ್ಲಿ, ಚತುಷ್ಪಥ ರಸ್ತೆಯನ್ನಾಗಿ ಅಭಿವೃದ್ಧಿಪಡಿಸಲು ಅಂದಾಜು ಎಷ್ಟು ಹಣ ಬೇಕಾಗುತ್ತದೆ; ಈವರೆಗೂ ಎಷ್ಟು ಹಣ ಮಂಜೂರು ಮಾಡಲಾಗಿದೆ; ಇಲ್ಲವಾದಲ್ಲಿ ಕಾರಣಗಳೇನು?

ಶ್ರೀ ಹೆಚ್.ಡಿ.ರೇವಣ್ಣ

ಅ) ಹೌದು

ಆ) ಹುಬ್ಬಳ್ಳಿ – ಧಾರವಾಡ ಮಧ್ಯದ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಅಭಿವೃದ್ಧಿಪಡಿಸಲು ರೂ. 100 ಕೋಟಿಗಳ ಅಂದಾಜು ಮೊತ್ತದಲ್ಲಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಕೈಗೊಳ್ಳುವ ಪ್ರಸ್ತಾವನೆಗೆ ವಿವರವಾದ ಯೋಜನಾ ವರದಿಯನ್ನು ತಯಾರಿಸಲು ಸಲಹೆಗಾರರನ್ನು ನೇಮಿಸಲು ಟೆಂಡರ್ ಪ್ರಕ್ರಿಯೆಯಲ್ಲಿದ್ದು, ಈ ರಸ್ತೆಯ ಅಭಿವೃದ್ಧಿಯ ಯೋಜನಾ ವರದಿ ತಯಾರಿಕೆಯ ಹಂತದಲ್ಲಿರುವುದರಿಂದ ಇದುವರೆವಿಗೂ ಯಾವುದೇ ಹಣ ಮಂಜೂರು ಮಾಡಿರುವುದಿಲ್ಲ.

ಪ್ರಶ್ನೆ ಸಂಖ್ಯೆ : 49 (12) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ)

ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಹುಬ್ಬಳ್ಳಿ – ಧಾರವಾಡ ಮಹಾನಗರದ ಜನತೆಯ ಬಹುದಿನಗಳ ಬೇಡಿಕೆಯಾದ 3ನೇ ಹಂತದ ಕುಡಿಯುವ ನೀರಿನ ಯೋಜನೆಗೆ ಸರ್ಕಾರ